# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 771

2. ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್‌ರಾಜು

(ವಿಧಾನ ಸಭೆಯಿಂದ ಚುನಾಯಿತರಾದವರು)

3. ಉತ್ತರಿಸಬೇಕಾಗಿದ್ದ ದಿನಾಂಕ : 24/07/2019

4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಮಾನ್ವಿ, ಸಿರವಾರ ಹಾಗೂ ಲಿಂಗಸಗೂರು ಪಟ್ಟಣದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯ ಮಾನ್ವಿ, ಸಿರವಾರ ಹಾಗೂ ಲಿಂಗಸಗೂರು ಪಟ್ಟಣದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲು ಈ ಕೆಳಕಂಡ ಕಾಮಗಾರಿಗಳಿಗೆ ಕೆ.ಕೆ.ಆರ್.ಡಿ.ಬಿ. ಮ್ಯಾಕ್ರೋ ಯೋಜನೆ ಅಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ:-<br><br>1. ಸಿರವಾರ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ರೂ. 400.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಕ್ರೀಡಾಂಗಣ ನಿರ್ಮಾಣಕ್ಕಾಗಿ 8 ಎಕರೆ ಜಮೀನು ಮಂಜೂರಾತಿಗಾಗಿ ಕ್ರಮವಹಿಸಲಾಗಿದೆ. ಜಮೀನು ಮಂಜೂರಾದ ತಕ್ಷಣವೇ ಕ್ರೀಡಾಂಗಣ ಕಾಮಗಾರಿ ಆರಂಭಿಸಲಾಗುವುದು.<br><br>2. ಮಾನ್ವಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ 2017-18ನೇ ಸಾಲಿನಲ್ಲಿ ರೂ. 200.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಸದರಿ ಕಾಮಗಾರಿಯನ್ನು ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ರಾಯಚೂರು ಇವರಿಗೆ ವಹಿಸಲಾಗಿದೆ. ಕ್ರೀಡಾಂಗಣ ನಿರ್ಮಾಣ |

| | | |
|---|---|---|
| | | ಕಾಮಗಾರಿ ಟೆಂಡರ್ ಪ್ರಕ್ರಿಯೆ ಮುಗಿದು ದಿನಾಂಕ: 23/07/2020 ರಂದು ಕ್ರೀಡಾಂಗಣದ ಶಂಕು ಸ್ಥಾಪನೆ ನೇರವೇರಿಸಲಾಗಿದೆ.<br>3. ಲಿಂಗಸಗೂರು ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ರೂ. 200.00 ಲಕ್ಷಗಳನ್ನು ನಿಗದಿಪಡಿಸಿದೆ. ಕಾಂಪೌಂಡು ಗೋಡೆ ನಿರ್ಮಾಣ ಕಾಮಗಾರಿ ಮುಕ್ತಾಯವಾಗಿರುತ್ತದೆ. Sitting ಗ್ಯಾಲರಿ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. |
| ಆ) | ಕ್ರೀಡಾ ಪಟುಗಳಿಗೆ ಪ್ರೋತ್ಸಾಹಿಸಲು ಸರ್ಕಾರ ಕಲ್ಪಿಸಿರುವ ಸೌಲಭ್ಯಗಳೇನು; | ಕ್ರೀಡಾ ಪಟುಗಳಿಗೆ ಪ್ರೋತ್ಸಾಹಿಸಲು ಸರ್ಕಾರ ಕಲ್ಪಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-1ರಲ್ಲಿ** ಒದಗಿಸಿದೆ. |
| ಇ) | ರಾಯಚೂರು ಜಿಲ್ಲೆಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಮಂಜೂರಾಗಿರುವ ಅನುದಾನ ಎಷ್ಟು? | ಜಿಲ್ಲಾ ಪಂಚಾಯಿತಿ ವಲಯದಲ್ಲಿ 2019-20ನೇ ಸಾಲಿಗೆ ರೂ.172.27 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ.<br>ಜಿಲ್ಲಾ ಪಂಚಾಯಿತಿ ವಲಯದಲ್ಲಿ 2020-21ನೇ ಸಾಲಿಗೆ ರೂ. 183.92 ಲಕ್ಷಗಳ ಅನುದಾನ ಮಂಜೂರು ಆಗಿರುತ್ತದೆ. |

ವೈಎಸ್‌ಡಿ/ಇಬಿಬಿ/34/2019

(ಸಹಿ)

**( ಬಿ.ಎಸ್.ಯಡಿಯೂರಪ್ಪ )**

ಮುಖ್ಯಮಂತ್ರಿ

# ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಕ್ರೀಡಾ ಪಟುಗಳಿಗೆ ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಪ್ರಮುಖ ಕಾರ್ಯಕ್ರಮಗಳ ವಿವರ

1. ಕ್ರೀಡಾ ಮೂಲಸೌಕರ್ಯಗಳ ಸೃಜನೆ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿವೇಶನಗಳಲ್ಲಿ ಕ್ರಿಡಾ ಮೂಲಸೌಕರ್ಯಗಳನ್ನು ಸೃಜಿಸುವ ಮೂಲಕ ಕ್ರೀಡಾಪಟುಗಳ ಕ್ರೀಡಾ ತರಬೇತಿಗೆ ಉತ್ತೇಜನ ನೀಡಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊರತುಪಡಿಸಿ, 29 ಜಿಲ್ಲಾ ಕೇಂದ್ರಗಳು ಹಾಗೂ 117 ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ರಾಜ್ಯದ 29 ಸ್ಥಳಗಳಲ್ಲಿ ಈಜುಕೊಳಗಳು ಹಾಗೂ 44 ಸ್ಥಳಗಳಲ್ಲಿ ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಅಲ್ಲದೇ, ರಾಜ್ಯದ 14 ಸ್ಥಳಗಳಲ್ಲಿ ಆಧುನಿಕ ಸಿಂಥೆಟಿಕ್ ಅಥ್ಲೆಟಿಕ್ಸ್ ಟ್ರ್ಯಾಕ್‌ಗಳು ಹಾಗೂ 04 ಸ್ಥಳಗಳಲ್ಲಿ ಹಾಕಿ ಟರ್ಫ್‌ಗಳನ್ನು ಅಳವಡಿಸಲಾಗಿದೆ.
2. ನಗದು ಪುರಸ್ಕಾರ: ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

| ಕ್ರಸ | ವಿವರ | ಚಿನ್ನ (ರೂ ಲಕ್ಷಗಳಲ್ಲಿ) | ಬೆಳ್ಳಿ (ರೂ ಲಕ್ಷಗಳಲ್ಲಿ) | ಕಂಚು (ರೂ ಲಕ್ಷಗಳಲ್ಲಿ) |
|---|---|---|---|---|
| 1 | ಒಲಂಪಿಕ್ಸ್ | 500.00 | 300.00 | 200.00 |
| 2 | ಏಷಿಯನ್ ಗೇಮ್ಸ್ | 25.00 | 15.00 | 8.00 |
| 3 | ಕಾಮನ್ ವೆಲ್ತ್ ಗೇಮ್ಸ್ | 25.00 | 15.00 | 8.00 |
| 4 | ವರ್ಲ್ಡ್ ಕಪ್/ಚಾಂಪಿಯನ್ ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 | 1.00 | 0.50 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |

3. ಏಕಲವ್ಯ ಪ್ರಶಸ್ತಿ: ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.
4. ಜೀವಮಾನ ಸಾಧನೆ ಪ್ರಶಸ್ತಿ: ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ್ದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಪ್ರಶಸ್ತಿ ನೀಡಲಾಗುವುದು.
5. ಶೈಕ್ಷಣಿಕ ಶುಲ್ಕ ಮರುಪಾವತಿ: ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.
6. ಕ್ರೀಡಾ ವಿದ್ಯಾರ್ಥಿ ವೇತನ: ರಾಜ್ಯ ಮಟ್ಟದ ಪದಕ ವಿಜೇತರಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
7. 'ಯುವ ಚೈತನ್ಯ': ಯುವ ಸಂಘಗಳಿಗೆ 'ಯುವ ಚೈತನ್ಯ' ಕಾರ್ಯಕ್ರಮದಡಿ ಕ್ರೀಡಾ ಕಿಟ್ ಗಳನ್ನು ವಿತರಿಸಲಾಗುತ್ತಿದೆ.
8. ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ ವಿತರಿಸಲಾಗುತ್ತಿದೆ. ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ 5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.

....1

9. ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.

10. ಗರಡಿ ಮನೆ ನಿರ್ಮಾಣ: ಕುಸ್ತಿ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ಸಲುವಾಗಿ ಗರಡಿ ಮನೆ ನಿರ್ಮಾಣ ಮತ್ತು ನವೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ.

11. ನಮ್ಮೂರ ಶಾಲೆಗೆ ನಮ್ಮ ಯುವಜನರು: ಈ ಕಾರ್ಯಕ್ರಮದಡಿ ಕ್ರೀಡಾ ಕ್ಷೇತ್ರದಡಿ ಸಾಧನೆ ಮಾಡಿದ ಸರಕಾರಿ ಶಾಲೆಗಳು ಕ್ರೀಡಾ ಚಟುವಟಿಕೆಗಳ ಪ್ರೋತ್ಸಾಹಕ್ಕಾಗಿ ಕ್ರೀಡಾ ಸಾಮಗ್ರಿಗಳನ್ನು ಪೂರೈಸಿಕೊಳ್ಳಲು ಪ್ರೋತ್ಸಾಹಧನ ಮತ್ತು ದೈಹಿಕ ಶಿಕ್ಷಕರ ಗೌರವಧನ ನೀಡಲಾಗುವುದು.

12. ಯುವ ಶಕ್ತಿ ಕೇಂದ್ರ : ಯುವಜನರ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಲು ಇಲಾಖಾ ಕ್ರೀಡಾಂಗಣಗಳು, ಕ್ರೀಡಾ ವಸತಿ ನಿಲಯಗಳು ಮತ್ತು ಸರ್ಕಾರಿ ಕಾಲೇಜುಗಳಿಗೆ ಜಿಮ್ ಉಪಕರಣಗಳನ್ನು ಒದಗಿಸಲಾಗುವುದು.

13. ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.

## ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್.ಎಸ್. ಬೋಸ್ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 771 ಕ್ಕೆ ಉತ್ತರಿಸುವುದಕ್ಕೆ ಸಂಬಂಧಿಸಿದಂತೆ ಪೂರಕ ಟಿಪ್ಪಣಿ

*****

ರಾಯಚೂರು ಜಿಲ್ಲೆಯ ಮಾನ್ವಿ, ಸಿರವಾರ ಹಾಗೂ ಲಿಂಗಸಗೂರು ಪಟ್ಟಣದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲು ಈ ಕೆಳಕಂಡ ಕಾಮಗಾರಿಗಳಿಗೆ ಕೆ.ಕೆ.ಆರ್.ಡಿ.ಬಿ. ಮ್ಯಾಕ್ರೋ ಯೋಜನೆ ಅಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

ಪ್ರಸ್ತುತ ಸಿರವಾರ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ರೂ 400.00 ಲಕ್ಷಗಳನ್ನು ನಿಗಧಿಪಡಿಸಲಾಗಿದೆ. ಕ್ರೀಡಾಂಗಣ ನಿರ್ಮಾಣಕ್ಕಾಗಿ 8 ಎಕರೆ ಜಮೀನು ಮಂಜೂರಾತಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಜಮೀನು ಮಂಜೂರಾದ ತಕ್ಷಣವೇ ಕ್ರೀಡಾಂಗಣ ಕಾಮಗಾರಿ ಆರಂಭಸಲಾಗುವುದು.

ಮಾನ್ವಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ 2017-18ನೇ ಸಾಲಿನಲ್ಲಿ ರೂ 200.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಸದರಿ ಕಾಮಗಾರಿಯನ್ನು ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ರಾಯಚೂರು ಇವರಿಗೆ ವಹಿಸಲಾಗಿದೆ. ಕ್ರೀಡಾಂಗಣ ನಿರ್ಮಾಣ ಕಾಮಗಾರಿ ಟೆಂಡರ್ ಪ್ರಕ್ರಿಯೆ ಮುಗಿದು ದಿನಾಂಕ: 23/07/2020 ರಂದು ಕ್ರೀಡಾಂಗಣದ ಶಂಖು ಸ್ಥಾಪನೆ ನೇರವೇರಿಸಲಾಗಿದೆ.

ಲಿಂಗಸ್ಗೂರು ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ರೂ 200.00 ಲಕ್ಷಗಳನ್ನು ನಿಗದಿಪಡಿಸಿದೆ. ಕಾಂಪೌಂಡು ಗೋಡೆ ನಿರ್ಮಾಣ ಕಾಮಗಾರಿ ಮುಕ್ತಾಯವಾಗಿರುತ್ತದೆ. Sitting ಗ್ಯಾಲರಿ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ.

1. **ಕ್ರೀಡಾ ಮೂಲಸೌಕರ್ಯಗಳ ಸೃಜನೆ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿವೇಶನಗಳಲ್ಲಿ ಕ್ರಿಡಾ ಮೂಲಸೌಕರ್ಯಗಳನ್ನು ಸೃಜಿಸುವ ಮೂಲಕ ಕ್ರೀಡಾಪಟುಗಳ ಕ್ರೀಡಾ ತರಬೇತಿಗೆ ಉತ್ತೇಜನ ನೀಡಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊರತುಪಡಿಸಿ, 29 ಜಿಲ್ಲಾ ಕೇಂದ್ರಗಳು ಹಾಗೂ 117 ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ರಾಜ್ಯದ 29 ಸ್ಥಳಗಳಲ್ಲಿ ಈಜುಕೊಳಗಳು ಹಾಗೂ 44 ಸ್ಥಳಗಳಲ್ಲಿ ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಅಲ್ಲದೇ, ರಾಜ್ಯದ 14 ಸ್ಥಳಗಳಲ್ಲಿ ಆಧುನಿಕ ಸಿಂಥೆಟಿಕ್ ಅಥ್ಲೆಟಿಕ್ಸ್ ಟ್ರ್ಯಾಕ್‌ಗಳು ಹಾಗೂ 04 ಸ್ಥಳಗಳಲ್ಲಿ ಹಾಕಿ ಟರ್ಫ್‌ಗಳನ್ನು ಅಳವಡಿಸಲಾಗಿದೆ.

......2

2. <u>ನಗದು ಪುರಸ್ಕಾರ:</u> ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

| ಕ್ರ ಸ | ವಿವರ | ಚಿನ್ನ (ರೂ ಲಕ್ಷಗಳಲ್ಲಿ) | ಬೆಳ್ಳಿ (ರೂ ಲಕ್ಷಗಳಲ್ಲಿ) | ಕಂಚು (ರೂ ಲಕ್ಷಗಳಲ್ಲಿ) |
|---|---|---|---|---|
| | | 500.00 | 300.00 | 200.00 |
| 1 | ಒಲಂಪಿಕ್ಸ್ | 25.00 | 15.00 | 8.00 |
| 2 | ಏಷಿಯನ್ ಗೇಮ್ಸ್ | 25.00 | 15.00 | 8.00 |
| 3 | ಕಾಮನ್ ವೆಲ್ತ್ ಗೇಮ್ಸ್ | 5.00 | 3.00 | 2.00 |
| 4 | ವರ್ಲ್ಡ್ ಕಪ್/ಚಾಂಪಿಯನ್ ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 2.00 | 1.00 | 0.50 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | | | |

3. <u>ಏಕಲವ್ಯ ಪ್ರಶಸ್ತಿ:</u> ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.
4. <u>ಜೀವಮಾನ ಸಾಧನೆ ಪ್ರಶಸ್ತಿ:</u> ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಪ್ರಶಸ್ತಿ ನೀಡಲಾಗುವುದು.
5. <u>ಶೈಕ್ಷಣಿಕ ಶುಲ್ಕ ಮರುಪಾವತಿ:</u> ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.
6. <u>ಕ್ರೀಡಾ ವಿದ್ಯಾರ್ಥಿ ವೇತನ:</u> ರಾಜ್ಯ ಮಟ್ಟದ ಪದಕ ವಿಜೇತರಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
7. <u>'ಯುವ ಚೈತನ್ಯ':</u> ಯುವ ಸಂಘಗಳಿಗೆ 'ಯುವ ಚೈತನ್ಯ' ಕಾರ್ಯಕ್ರಮದಡಿ ಕ್ರೀಡಾ ಕಿಟ್ ಗಳನ್ನು ವಿತರಿಸಲಾಗುತ್ತಿದೆ.
8. ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ ವಿತರಿಸಲಾಗುತ್ತಿದೆ. ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ 5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.

......3

9. ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.

10. **ಗರಡಿ ಮನೆ ನಿರ್ಮಾಣ:** ಕುಸ್ತಿ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ಸಲುವಾಗಿ ಗರಡಿ ಮನೆ ನಿರ್ಮಾಣ ಮತ್ತು ನವೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ.

11. **ನಮ್ಮೂರ ಶಾಲೆಗೆ ನಮ್ಮ ಯುವಜನರು:** ಈ ಕಾರ್ಯಕ್ರಮದಡಿ ಕ್ರೀಡಾ ಕ್ಷೇತ್ರದಡಿ ಸಾಧನೆ ಮಾಡಿದ ಸರಕಾರಿ ಶಾಲೆಗಳು ಕ್ರೀಡಾ ಚಟುವಟಿಕೆಗಳ ಪ್ರೋತ್ಸಾಹಕ್ಕಾಗಿ ಕ್ರೀಡಾ ಸಾಮಗ್ರಿಗಳನ್ನು ಪೂರೈಸಿಕೊಳ್ಳಲು ಪ್ರೋತ್ಸಾಹಧನ ಮತ್ತು ದೈಹಿಕ ಶಿಕ್ಷಕರ ಗೌರವಧನ ನೀಡಲಾಗುವುದು.

12. **ಯುವ ಶಕ್ತಿ ಕೇಂದ್ರ :** ಯುವಜನರ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಲು ಇಲಾಖಾ ಕ್ರೀಡಾಂಗಣಗಳು, ಕ್ರೀಡಾ ವಸತಿ ನಿಲಯಗಳು ಮತ್ತು ಸರ್ಕಾರಿ ಕಾಲೇಜುಗಳಿಗೆ ಜಿಮ್ ಉಪಕರಣಗಳನ್ನು ಒದಗಿಸಲಾಗುವುದು.

13. ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದ್ಹಾನ ನೀಡಲಾಗುತ್ತಿದೆ.